

ಅರುಣ ಪಿ. ಭಟ್ಟ



## ವಾರಭವಿಷ್ಯ 13.05.2021ರಿಂದ 19.05.2021ರವರೆಗೆ




ವೆಚ್ಚ ಏರಿದರೂ ಆದಾಯದಲ್ಲಿನ ಹೆಚ್ಚಳ ಖರ್ಚುಗಳನ್ನು ಸರಿದೂಗಿಸುತ್ತದೆ. ನಿಮ್ಮ ಅಭಿಪ್ರಾಯಗಳನ್ನು ಇತರರ ಮೇಲೆ ಹೇರಬೇಡಿ. ನಿಮ್ಮ ಮನೆಯಲ್ಲಿ ಸಾಮರಸ್ಯ ತರಲು ನಿಕಟ ಸಹಕಾರದೊಂದಿಗೆ ಕೆಲಸ ಮಾಡಬೇಕು. ನಿಮ್ಮ ಸ್ಪರ್ಧಾತ್ಮಕ ಸ್ವಭಾವ ನೀವು ಸದಾ ಮುಂದೆ ಉಳಿಯಲು ಸಹಾಯ ಮಾಡುತ್ತದೆ. ವಿರೋಧಿಗಳಿಂದ ದೂರವಿರಲು ಪ್ರಯತ್ನಿಸಿ. ಶುಭದಿನ **14.** ಶ್ರೀ ದುರ್ಗಾ ಆರಾಧನೆ ಮಾಡಿರಿ.




ವಾರದ ಶುರುವಿನಿಂದಲೇ ವೃತ್ತಿಪರ ಜೀವನದಲ್ಲಿ ಉತ್ತಮ ಅವಕಾಶಗಳು ದೊರೆಯಲಿವೆ. ಅದರ ಫಲಿತವಾಗಿ ಸರಿಯಾದ ಸಮಯಕ್ಕೆ ಕೆಲಸ ಪೂರ್ಣಗೊಳ್ಳಲಿವೆ. ಮಕ್ಕಳಿಗೆ ಸಹಾಯ ಮಾಡಲಿದ್ದೀರಿ. ಕುಟುಂಬದಲ್ಲಿ ಹಲವು ಬದಲಾವಣೆ ತರುವ ಮೂಲಕ ಸಂತೋಷ ಉಂಟು ಮಾಡಲಿದ್ದೀರಿ. ಉದ್ಯೋಗ ಸ್ಥಳದಲ್ಲಿ ಹೆಚ್ಚು ತಾಳ್ಮೆಯಿಂದ ಕೆಲಸ ಮಾಡಿ. ಶುಭದಿನ **18.** ಹನುಮಾನ್ ಚಾಲೀಸ್ ಓದಿರಿ.




ದಾನ ಧರ್ಮ ಕಾರ್ಯಗಳಲ್ಲಿ ಆಸಕ್ತಿ ಮೂಡುತ್ತದೆ. ಅದಕ್ಕೆ ನಿಮ್ಮ ಕುಟುಂಬದ ಬೆಂಬಲವೂ ದೊರೆಯುತ್ತದೆ. ಆದಾಯ ಮೂಲಗಳಿಂದ ಉತ್ತಮ ವರಮಾನ ಇರುತ್ತದೆ. ಇದರಿಂದ ನಿಮ್ಮ ಆತ್ಮವಿಶ್ವಾಸ ಹೆಚ್ಚಾಗುತ್ತದೆ ಸಂತೋಷ ಕೂಡ ಉಂಟಾಗುತ್ತದೆ. ನಿಮ್ಮ ಜೀವನಶೈಲಿ ಮತ್ತಷ್ಟು ಉತ್ತಮಗೊಳ್ಳುತ್ತದೆ. ಶುಭದಿನ **19.** ಗಣಪತಿಗೆ **108** ದೂರ್ವಾರ್ಚನೆ ಮಾಡಿರಿ.




ನಿಮ್ಮ ಸಾಮರ್ಥ್ಯವನ್ನು ಸರಿಯಾದ ದಿಕ್ಕಿನಲ್ಲಿ ಬಳಕೆ ಮಾಡಿಕೊಳ್ಳುತ್ತೀರಿ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಕುಟುಂಬದ ಸದಸ್ಯರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಸೋದರ– ಸೋದರಿ ಜತೆಗೆ ಅತಿ ಮುಖ್ಯವಾದ ವಿಚಾರಗಳನ್ನು ಚರ್ಚೆ ಮಾಡುತ್ತೀರಿ. ಇದರಿಂದ ಅವರ ಪ್ರಗತಿಗೆ ಅನುಕೂಲ ಆಗುತ್ತದೆ. ವಾರದ ಕೊನೆ ಭಾಗದಲ್ಲಿ ಕೆಲಸದಲ್ಲಿ ಪ್ರಗತಿ ಇದೆ. ಶುಭದಿನ **14.** ವಿಷ್ಣು ಸಹಸ್ರನಾಮ ಓದಿರಿ.




ವಾರದ ಮೊದಲ ಭಾಗದಲ್ಲಿ ದೂರದ ಪ್ರದೇಶಗಳಿಗೆ ತೆರಳುವ ಸಂಭವ. ಭೂಮಿಗೆ ಸಂಬಂಧಿಸಿದ ವ್ಯಾಜ್ಯಗಳು ಕೋರ್ಟ್ ನಲ್ಲಿ ಇದ್ದರೆ ಅವುಗಳನ್ನು ನಿವಾರಿಸಿಕೊಳ್ಳುವ ನಿಟ್ಟಿನಲ್ಲಿ ಹೆಚ್ಚು ಶ್ರಮ ಪಡಬೇಕಾಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಆಲೋಚನೆ ಮಾಡುತ್ತೀರಿ. ನಿಮ್ಮ ಆರೋಗ್ಯದಲ್ಲಿ ಸ್ವಲ್ಪ ಏರುಪೇರು ಆಗಬಹುದು. ಶುಭದಿನ **16** ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಸಂಬಂಧಿಕರ ಭೇಟಿ ಮಾಡುವ ಸಾಧ್ಯತೆ ಇದೆ. ಕೆಲ ಮುಖ್ಯವಾದ ವಿಚಾರಗಳನ್ನು ಅವರ ಜತೆ ಚರ್ಚೆ ಮಾಡಲಿದ್ದೀರಿ. ಹೆಚ್ಚಿನ ಖರ್ಚು ಆಗಲಿದೆ. ಉದ್ಯೋಗದಲ್ಲಿ ಒತ್ತಡ ಹೆಚ್ಚಾಗುವ ಸಾಧ್ಯತೆಯಿದೆ. ತಲೆ ನೋವು, ಕಿವಿ ನೋವು ಅಥವಾ ಹಲ್ಲು ನೋವಿನಂಥ ಸಮಸ್ಯೆಗಳು ಕಾಡಬಹುದು. ಭೂಮಿ ಖರೀದಿಗೆ ಮನಸ್ಸು ಮಾಡುತ್ತಿರಿ. ಶುಭದಿನ **15.** ದೇವ್ಯಪರಾಧ ಕ್ಷಮಾಪನಾ ಸ್ತೋತ್ರ **18** ಸಾರೆ ಪಠಣ ಮಾಡಿರಿ.




ವ್ಯಾಪಾರ ವ್ಯವಹಾರಗಳಲ್ಲಿ ಪ್ರಗತಿ ಕಾಣಿಸುತ್ತದೆ. ನಿಮ್ಮ ಆರೋಗ್ಯ ಕೂಡ ಉತ್ತಮವಾಗಿರುತ್ತದೆ. ಮಕ್ಕಳ ಪ್ರಗತಿ ನಿಧಾನ ಆಗುವುದರಿಂದ ಚಿಂತೆಗೆ ಕಾರಣವಾಗುತ್ತದೆ. ತಂತ್ರಜ್ಞಾನ ಹಾಗೂ ಮ್ಯಾನೇಜ್‌ಮೆಂಟ್ ಕ್ಷೇತ್ರಕ್ಕೆ ಸಂಬಂಧಿಸಿದವರಿಗೆ ಉತ್ತಮವಾದ ಪ್ರಗತಿ ಕಾಣಲಿದೆ. ಕೆಲ ನಿರ್ದಿಷ್ಟ ಕೆಲಸಗಳನ್ನು ಪೂರೈಸಲು ಹೆಚ್ಚಿನ ಶ್ರಮ ಹಾಕಬೇಕಾಗುತ್ತದೆ. ಶುಭದಿನ **17.** ದಕ್ಷಿಣಾಮೂರ್ತಿ ಸ್ತೋತ್ರ ಪಠಣ ಮಾಡಿರಿ.




ಉದ್ಯೋಗಸ್ಥರು ನಿಮಗೆ ವಹಿಸಿದ ಕೆಲಸಗಳನ್ನು ಪೂರೈಸಲು ಯಶಸ್ವಿ ಆಗುತ್ತೀರಿ. ಸಿಬ್ಬಂದಿಯ ಆತ್ಮಸ್ಥೈರ್ಯ ಹೆಚ್ಚಿಸುವಲ್ಲಿ ಸಫಲರಾಗುತ್ತೀರಿ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಯಶಸ್ಸು ಕಾಣುವ ಸಾಧ್ಯತೆಗಳಿವೆ. ವಾರದ ಕೊನೆಯಲ್ಲಿ ದೂರದ ಪ್ರದೇಶಗಳಿಗೆ ಭೇಟಿ ನೀಡಬೇಕಾಗುತ್ತದೆ. ಕೆಲವು ಮುಖ್ಯ ಕೆಲಸಗಳನ್ನು ಪೂರ್ಣಗೊಳಿಸಬೇಕಾಗುತ್ತದೆ. ಶುಭದಿನ **16.** ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಹಣಕಾಸು ಹೂಡಿಕೆಯಲ್ಲಿ ಪ್ರಗತಿ ಕಾಣಲಿದ್ದೀರಿ. ಬಾಹ್ಯ ಚಟುವಟಿಕೆಗಳು ಈ ಹಿಂದಿನಂತೆಯೇ ನಡೆಯುತ್ತವೆ. ಈ ಸಮಸ್ಯೆಗಳಿಗೆ ಆಸ್ಪತ್ರೆಗೆ ಹೋಗುವುದು ಅನಿವಾರ್ಯ ಆಗುತ್ತದೆ. ಸಂಗಾತಿಯಿಂದ ಕೆಲ ಗೊಂದಲ, ಆತಂಕ ಸೃಷ್ಟಿ ಆಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಗ್ರಹ ಸ್ಥಿತಿಗಳು ನಿಮಗೆ ಅನುಕೂಲಕರವಾಗಿ ಪರಿಣಮಿಸುತ್ತದೆ. ಶುಭದಿನ **18.** ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.




ವಾರದ ಶುರುವಿನಿಂದಲೇ ನಿಮ್ಮ ಅದೃಷ್ಟ ಚೆನ್ನಾಗಿದೆ. ನಿಮ್ಮ ಕೆಲಸಗಳನ್ನು ಪೂರ್ಣಗೊಳಿಸಲು ಹಿಂದೆಂದಿಗಿಂತಲೂ ಹೆಚ್ಚು ಚಟುವಟಿಕೆಯಿಂದ ಕಾಣಿಸಿಕೊಳ್ಳುತ್ತಿರಿ. ಕಟ್ಟಡ ವಾಹನಗಳ ನಿರ್ವಹಣೆಯು ನಿರಂತರ ಚಿಂತೆಗೆ ಕಾರಣವಾಗುತ್ತದೆ. ಉದ್ಯೋಗ ನೇಮಕಾತಿಯ ಜವಾಬ್ದಾರಿಯ ಹೊತ್ತಿರುವವರು ಸಾಮರ್ಥ್ಯದ ಸದುಪಯೋಗ ಮಾಡಿಕೊಳ್ಳಬೇಕು. ಶುಭದಿನ **15.** ಮಾರುತಿ ಗುಡಿಗೆ ಮುಖ ನೋಡಿದ ಎಣ್ಣೆ ನೀಡಿರಿ.




ವ್ಯಾಪಾರ ಮಾಡುತ್ತಿರುವವರು ಮುಂದಿನ ಹಂತಕ್ಕೆ ತೆಗೆದುಕೊಂಡು ಹೋಗಲು ಯತ್ನಿಸುತ್ತೀರಿ. ನಿಮ್ಮ ಶ್ರಮಕ್ಕೆ ಯಶಸ್ಸು ದೊರೆಯುತ್ತದೆ. ವೈವಾಹಿಕ ಜೀವನವು ಸಂತೋಷವಾಗಿ ಇರುತ್ತದೆ. ಮನಸಿಗೆ ಸಂತೋಷ ನೀಡುವಂತಹ ಗೃಹಾಲಂಕಾರ ವಸ್ತುಗಳ ಖರೀದಿಗೆ ಮುಂದಾಗುತ್ತೀರಿ. ಉದ್ಯಮಿಗಳಾಗಿದ್ದಲ್ಲಿ ದೀರ್ಘಾವಧಿ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಶುಭದಿನ **16.** ಸುಬ್ರಹ್ಮಣ್ಯ ಜಪ ಮಾಡಿರಿ.




ನಿಮ್ಮ ಕೆಲಸ– ಕಾರ್ಯಗಳನ್ನು ಇನ್ನಷ್ಟು ಒಪ್ಪ ಓರಣವಾಗಿ ಮಾಡಲು ಇನ್ನೂ ಹೆಚ್ಚಿನ ಶ್ರಮ ಹಾಕುತ್ತೀರಿ. ವ್ಯವಹಾರಗಳನ್ನು ಮಾಡುವಾಗ ಬಹಳ ಎಚ್ಚರಿಕೆಯಿಂದ ಇರಬೇಕಾಗುತ್ತದೆ. ಜತೆಗೆ ಸ್ವಚ್ಛತೆ ಕಡೆಗೆ ಹೆಚ್ಚಿನ ಗಮನ ನೀಡಬೇಕಾಗುತ್ತದೆ. ಭೂಮಿ ಖರೀದಿ ವಿಚಾರದಲ್ಲಿ ಬಿಕ್ಕಟ್ಟುಗಳು ಇದ್ದಲ್ಲಿ ಅವು ನಿವಾರಣೆ ಆಗುತ್ತವೆ. ಇದರಿಂದ ನಿಮಗೆ ಅನುಕೂಲ ಆಗಲಿದೆ. ಶುಭದಿನ **14.** ನವದುರ್ಗಾ ಆರಾಧನೆ ಮಾಡಿರಿ.